Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

21.02.2025 14.30 hrs

<><*<><>*><>

ಮುಖ್ಯಾಂಶಗಳು

- ಹೊರ ರಾಜ್ಯಗಳ ನಿಷೇಧಿತ ಔಷಧಿಗಳ ಮಾರಾಟಕ್ಕೆ ನಿರ್ಬಂಧ ಹೇರುವಂತೆ ಕೇಂದ್ರ ಸರ್ಕಾರಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪತ್ರ
- ವಾಣಿಜ್ಯ ಸಂಘ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಭೆ
- ರಾಜ್ಯದ ವಿವಿಧೆಡೆ ದೇವಾಲಯಗಳ ಒತ್ತುವರಿ ತೆರವುಗೊಳಿಸಲು ಸರ್ವೇ ಕಾರ್ಯ - ಸಚಿವ ರಾಮಲಿಂಗಾ ರೆಡ್ಡಿ
- ಬೆಂಗಳೂರಿನ ಬಡಾವಣೆಗಳಲ್ಲಿ ಗಿಡ, ಮರ ಬೆಳೆಸುವಂತೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚನೆ
- ಲಕ್ಷ್ಮೀ ಹೆಬ್ಬಾಳ್ಕರ್ ಅಪಘಾತ ಪ್ರಕರಣ; ಹೊರ ರಾಜ್ಯದ ಕ್ಯಾಂಟರ್ ಲಾರಿಗಾಗಿ ಪೊಲೀಸರಿಂದ ತೀವ್ರ ಶೋಧ

<><*<><>*><>

ರಾಜ್ಯದ ಪ್ರಯೋಗಾಲಯ ನಡೆಸಿದ ಹಲವು ಪರೀಕ್ಷೆಗಳಲ್ಲಿ ವಿಫಲವಾಗಿರುವ ಹೊರ ರಾಜ್ಯಗಳ ಕೆಲ ಔಷಧಿಗಳ ಮಾರಾಟದ ಹಾವಳಿಯನ್ನು ತಪ್ಪಿಸಲು ರಾಜ್ಯ ಸರ್ಕಾರ, ಕೇಂದ್ರ ಆರೋಗ್ಯ ಸಚಿವಾಲಯದ ಸಹಾಯ ಕೋರಿದೆ. ಈ ಸಂಬಂಧ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪತ್ರ ಬರೆದಿದ್ದಾರೆ. ಜನವರಿ ೧ ಮತ್ತು ಫೆಬ್ರವರಿ ೧೭ರ ನಡುವೆ ಇತರ ರಾಜ್ಯಗಳ ೯ ಚುಚ್ಚುಮದ್ದು ಔಷಧಗಳು ರಾಜ್ಯ ಸರ್ಕಾರದ ಪ್ರಯೋಗಾಲಯಗಳಲ್ಲಿ ವಿಫಲವಾಗಿವೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ತಯಾರಿಸಿದ ಕೆಲವು ಚುಚ್ಚುಮದ್ದುಗಳು, ಬಳ್ಳಾರಿಯಲ್ಲಿ ಬಾಣಂತಿಯರ ಸಾವಿಗೆ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ಇಂತಹ ಔಷಧಿಗಳ ಮಾರಾಟಕ್ಕೆ ನಿಯಂತ್ರಣ ಹೇರುವಂತೆ ಕೇಂದ್ರ ಸರ್ಕಾರವನ್ನು ಅವರು ಒತ್ತಾಯಿಸಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ವಾಣಿಜ್ಯ ಸಂಘ ಸಂಸ್ಥೆಗಳ ಪ್ರತಿನಿಧಿಗಳ ಜತೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಬಜೆಟ್ ಪೂರ್ವ ಸಭೆ ನಡೆಸಿ, ಅಹವಾಲುಗಳನ್ನು ಆಲಿಸಿದರು. ಇದೇ ವೇಳೆ ಸರ್ಕಾರ ಇತ್ತೀಚೆಗೆ ಜಾರಿಗೆ ತಂದಿರುವ ಹೊಸ ಪ್ರವಾಸೋದ್ಯಮ ನೀತಿ ಬಗ್ಗೆ ವಾಣಿಜ್ಯೋದ್ಯಮಿಗಳು ಮತ್ತು ವಾಣಿಜ್ಯ ಸಂಘ ಸಂಸ್ಥೆಗಳು ಮೆಚ್ಚುಗೆ ವ್ಯಕ್ತಪಡಿಸಿವೆ. ಬಜೆಟ್ ಪೂರ್ವ ಸಭೆಯಲ್ಲಿ ಹೊಸ ಪ್ರವಾಸೋದ್ಯಮ ನೀತಿಯನ್ನು ಶ್ಲಾಘಿಸಿದ್ದಾರೆ. ಈ ನೀತಿ ಏಕ ಕಾಲಕ್ಕೆ ರಾಜ್ಯದ ಆರ್ಥಿಕತೆ ವೃದ್ಧಿಸುವ ಜೊತೆಗೆ ಉದ್ಯಮಗಳ ಬೆಳವಣಿಗೆಗೂ ಪೂರಕವಾಗಿದೆ ಎಂದು ವಾಣಿಜ್ಯೋದ್ಯಮಿಗಳು ಅಭಿಪ್ರಾಯಪಟ್ಟಿದ್ದಾರೆ. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾರಿಗೆ ಸಂಘ ಸಂಸ್ಥೆಗಳೊಂದಿಗೆ ಹಾಗೂ ಪರಿಶಿಷ್ಟ ಉದ್ಯಮಿಗಳು ಹಾಗೂ ಕೈಗಾರಿಕೋದ್ಯಮಿಗಳೊಂದಿಗೆ ಬಜೆಟ್ ಪೂರ್ವ ಸಭೆ ನಡೆಸಿದರು.

<><*<><>*><>

ಮೈಸೂರಿನ ಜಗನ್ಮೋಹನ ಅರಮನೆ ಸಭಾಂಗಣದಲ್ಲಿಂದು ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿ ಇಲಾಖೆ, ಕರ್ನಾಟಕ ರಾಜ್ಯ ಆಗಮ ಶಿಕ್ಷಣ ಮತ್ತು ಪರೀಕ್ಷಾ ಸಮಿತಿ ವತಿಯಿಂದ ಆಗಮ ಘಟಿಕೋತ್ಸವ - ೨೦೨೫ ನಡೆಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮುಜರಾಯಿ ಹಾಗೂ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, ರಾಜ್ಯದ ವಿವಿಧ ದೇವಸ್ಥಾನಗಳ ಅಭಿವೃದ್ಧಿಗೆ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು. ದೇವಸ್ಥಾನಗಳ ಒತ್ತುವರಿಯನ್ನು ತೆರವುಗೊಳಿಸಲು ಸರ್ವೇ ನಡೆಸಲಾಗುತ್ತಿದ್ದು, ಈಗಾಗಲೇ ಸಾವಿರಾರು ಎಕರೆ ಪ್ರದೇಶವನ್ನು ಧಾರ್ಮಿಕ ದತ್ತಿ ಇಲಾಖೆಯ ವಶಕ್ಕೆ ಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದರು. ಮುಂದಿನ ದಿನಗಳಲ್ಲಿ ೨೦೦೭ ರಿಂದ ಆಗಮ ಶಾಸ್ತ್ರದಲ್ಲಿ ಪದವಿ ಪಡೆದಿರುವ ಎಲ್ಲರಿಗೂ ಪ್ರಮಾಣ ಪತ್ರ ವಿತರಣೆ ಮಾಡಲಾಗುವುದು ಎಂದು ಹೇಳಿದರು.

<><*<><>*><>

ಅರಣ್ಯ ಇಲಾಖೆಯಿಂದ ರಾಜ್ಯದ ವಿವಿಧೆಡೆ ನಿರ್ಮಿಸಲಾಗಿರುವ ಜೈವಿಕ ಉದ್ಯಾನ ಮತ್ತು ಸಸ್ಯೋದ್ಯಾನಗಳಲ್ಲಿ ಮರಗಳ ಹೆಸರು, ಅವುಗಳ ಪ್ರಭೇದ ಇತ್ಯಾದಿಯ ಸಂಕ್ಷಿಪ್ತ ವಿವರವಿರುವ ಫಲಕ ಹಾಕುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಸರ್ವಜ್ಞನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೆಣ್ಣೂರು ಜೈವಿಕ ಉದ್ಯಾನಕ್ಕೆ ಇಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರೊಂದಿಗೆ ತೆರಳಿ ಪರಿಶೀಲನೆ ನಡೆಸಿದ ಅವರು ಇಂದಿನ ಮಕ್ಕಳು ವೃಕ್ಷ ಗುರುತಿಸುವಂತೆ ಅರಿವು ಮೂಡಿಸಬೇಕು ಎಂದು ತಿಳಿಸಿದ್ದಾರೆ. ಬೆಂಗಳೂರಿನ ಎಲ್ಲಾ ಬಡಾವಣೆಯಲ್ಲೂ ಮರಗಳನ್ನು ಬೆಳೆಸಿ, ಸಾರ್ವಜನಿಕರಿಗೆ ಶುದ್ಧ ಆಮ್ಲಜನಕ ಲಭ್ಯವಾಗುವಂತೆ ಮಾಡಲು ಅರಣ್ಯ ಸಚಿವರು ಸೂಚನೆ ನೀಡಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲಾ ಸಾಹಿತ್ಯ ಪರಿಷತ್ ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ವತಿಯಿಂದ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಯುತ್ತಿರುವ ೨೭ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ ದೊರೆತಿದೆ. ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿದ ಕವಿ ಬಿ.ಆರ್.ಲಕ್ಷ್ಮಣ ರಾವ್, ಕನ್ನಡ ಭಾಷೆ ಇಂದು ಆಂಗ್ಲ ಮತ್ತು ಹಿಂದಿ ಭಾಷೆಗಳ ನಡುವೆ ನಲುಗಿ ಹೋಗುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ. ಕನ್ನಡದ ಉಳಿವಿನ ಬಗ್ಗೆ ಸರ್ಕಾರ ಸೇರಿದಂತೆ ಪ್ರತಿಯೊಬ್ಬ ಕನ್ನಡಿಗರೂ ಚಿಂತಿಸಬೇಕಾದ ಅವಶ್ಯಕತೆ ಇದೆ ಎಂದು ಪ್ರತಿಪಾದಿಸಿದ್ದಾರೆ. ಸಮ್ಮೇಳನದ ಸ್ಮರಣ ಸಂಚಿಕೆ ಬಿಡುಗಡೆ ಮಾಡಿ ಮಾತನಾಡಿದ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಸಾಹಿತ್ಯ ಪುಸ್ತಕಗಳನ್ನು ಓದುವವರ ಸಂಖ್ಯೆ ಹೆಚ್ಚಾಗಬೇಕು. ನಮ್ಮ ಭಾಷೆ, ಸಂಸ್ಕೃತಿಯನ್ನು ಯಾವ ರೀತಿ ಮುಂದೆ ಕೊಂಡೊಯ್ಯಬೇಕು ಎಂಬುದಕ್ಕೆ ಈ ಸಾಹಿತ್ಯ ಸಮ್ಮೇಳನದ ಚರ್ಚೆಯು ವೇದಿಕೆಯಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೨೩ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ

ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ. ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಲಹೆ ಹಾಗೂ ಅಭಿಪ್ರಾಯಗಳನ್ನು ಕಳುಹಿಸಲು ಇಂದು ಕೊನೆಯ ದಿನವಾಗಿದೆ. ಆಸಕ್ತರು ಒಥಿ ಉುov.iಟಿ ವೇದಿಕೆ ಮೂಲಕ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದಾಗಿದೆ.

<><*<><>*><>

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಪಘಾತ ಪ್ರಕರಣದಲ್ಲಿ ಭಾಗಿಯಾಗಿರುವ ಕ್ಯಾಂಟರ್ ಟ್ರಕ್‌ಗಾಗಿ ಬೆಳಗಾವಿ ಪೊಲೀಸರು ತೀವ್ರ ಶೋಧ ಆರಂಭಿಸಿದ್ದಾರೆ. ಜನವರಿ ೧೪ರಂದು ಸಂಭವಿಸಿದ ಕಾರು ಅಪಘಾತದಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಾಣಾಪಾಯದಿಂದ ಪಾರಾಗಿದ್ದರು.  ಅಪಘಾತದಲ್ಲಿ ಹೆಬ್ಬಾಳ್ಕರ್ ಸಹೋದರ, ಪರಿಷತ್ ಸದಸ್ಯ ಚನ್ನರಾಜ್ ಹಟ್ಟಿಹೊಳಿ ಅವರಿಗೂ ಗಾಯವಾಗಿತ್ತು. ಅಪಘಾತ ನಡೆಸಿದ ಕ್ಯಾಂಟರ್, ಪಂಜಾಬ್ ಇಲ್ಲವೆ ಹರಿಯಾಣ ರಾಜ್ಯಕ್ಕೆ ಸೇರಿದ್ದು ಎಂದು ಪೊಲೀಸರು ತಿಳಿಸಿದ್ದಾರೆ.  ಹಿರೇಬಾಗೇವಾಡಿ ಟೋಲ್‌ನಲ್ಲಿರುವ ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ಪೊಲೀಸರು, ೭೦ ಕ್ಯಾಂಟರ್‌ಗಳ ಪಟ್ಟಿ ಸಿದ್ಧಪಡಿಸಿ, ಶೋಧ ಕಾರ್ಯ ಆರಂಭಿಸಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

<><*<><>*><>

ಸಣ್ಣ ಹಣಕಾಸು ಸಂಸ್ಥೆಗಳು ಸಾಲಗಾರರಿಗೆ ಸಾಲ ವಸೂಲಾತಿ ಸಂದರ್ಭದಲ್ಲಿ ಕಿರುಕುಳ ನೀಡಿದರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಹಾಸನ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಮತ್ತು ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಎಚ್ಚರಿಕೆ ನೀಡಿದ್ದಾರೆ.  ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ರಾಜ್ಯ ಸರ್ಕಾರ ಹೊರಡಿಸಿರುವ ಸುಗ್ರಿವಾಜ್ಞೆಯ ಬಗ್ಗೆ ವಿವರ ನೀಡಿದ ಅವರು, ಸುಗ್ರೀವಾಜ್ಞೆ ಫೆಬ್ರವರಿ ೧೨ರಿಂದಲೇ ಜಾರಿಯಾಗಿದೆ. ಸಣ್ಣ ಹಣಕಾಸು ಸಂಸ್ಥೆಗಳು ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು. ಜೊತೆಗೆ ಸಾಲ ನೀಡುವಾಗ ಸಾಲಗಾರರಿಂದ ಯಾವುದೇ ಭದ್ರತೆ ಕೇಳುವಂತಿಲ್ಲ ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮಾ ತಿಳಿಸಿದ್ದಾರೆ.

****ಬೈಟ್***ಸಿ. ಸತ್ಯಭಾಮಾ

<><*<><>*><>

ಮುಂಬರುವ ಬಜೆಟ್ ಅಧಿವೇಶನ ಕುರಿತು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿಂದು ಮಹತ್ವದ ಸಭೆ ನಡೆಯಿತು. ವಿಧಾನಪರಿಷತ್ ಸದಸ್ಯರೊಂದಿಗೆ ನಡೆದ ಸಭೆಯಲ್ಲಿ ಸದನದಲ್ಲಿ ಪ್ರಶ್ನೆಗಳನ್ನು ಕೇಳುವುದು, ಚರ್ಚೆಗೆ ಒಳಪಡಿಸುವ ವಿಷಯಗಳು ಹಾಗೂ ನಿಲುವಳಿ ಸೂಚನೆಯ ಮಂಡನೆಗೆ ಸಂಬಂಧಿಸಿದಂತೆ ಚರ್ಚೆ ನಡೆಸಲಾಯಿತು. ರಾಜ್ಯ ಸರ್ಕಾರದ ಭ್ರಷ್ಟಾಚಾರ, ವೈಫಲ್ಯ, ಜನವಿರೋಧಿ ನೀತಿಗಳನ್ನು ಬಹಿರಂಗಪಡಿಸಲು ಹಾಗೂ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಲು ಹೋರಾಟ ನಡೆಸುವ ಬಗ್ಗೆ ಮಹತ್ವದ ನಿರ್ಧಾರ ಕೈಗೊಳ್ಳಲಾಯಿತು.

<><*<><>*><>

ಮಾರ್ಚ್ ೧ ರಿಂದ ೨೦ರ ವರೆಗೆ ರಾಜ್ಯಾದ್ಯಂತ ದ್ವಿತೀಯ ಪಿಯುಸಿ ಪರೀಕ್ಷೆ ನಡೆಯಲಿದೆ. ದಾವಣಗೆರೆ ಜಿಲ್ಲೆಯ ೩೫ ಕೇಂದ್ರಗಳಲ್ಲಿ ಪಿಯುಸಿ ಪರೀಕ್ಷೆಗೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಅಧಿಕಾರಿಗಳು ಪರೀಕ್ಷಾ

ಕಾರ್ಯದಲ್ಲಿ ಲೋಪವಾಗದಂತೆ ಕಾರ್ಯನಿರ್ವಹಿಸಬೇಕೆಂದು ಹೆಚ್ಚುವರಿ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದ್ದಾರೆ. ಪರೀಕ್ಷೆ ಸಂಬಂಧ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಪರೀಕ್ಷೆಗೆ ಪದವಿ ಪೂರ್ವ ಶಿಕ್ಷಣ ಇಲಾಖೆ ಅಧಿಕಾರಿಗಳು, ಪ್ರಾಂಶುಪಾಲರು, ಉಪನ್ಯಾಸಕರು ಶ್ರಮವಹಿಸಿ, ಬಹಳ ಎಚ್ಚರಿಕೆಯಿಂದ ಕೆಲಸ ನಿರ್ವಹಿಸಬೇಕೆಂದು ಸೂಚಿಸಿದ್ದಾರೆ.

<><*<><>*><>

ಇಂದು ನಾಡು ಕಂಡ ಶ್ರೇಷ್ಠ ಸ್ವಾತಂತ್ರ್ಯ ಹೋರಾಟಗಾರರಲ್ಲಿ ಒಬ್ಬರಾದ ಕಿತ್ತೂರು ರಾಣಿ ಚೆನ್ನಮ್ಮ ಪುಣ್ಯಸ್ಮರಣೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಣಿ ಚೆನ್ನಮ್ಮ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಅವರು, ಜನರಲ್ಲಿ ಸ್ವಾತಂತ್ರ್ಯದ ಕಿಚ್ಚು ಹೊತ್ತಿಸಿದ ಕನ್ನಡತಿ, ವೀರ ವನಿತೆ ಕಿತ್ತೂರು ರಾಣಿ ಚೆನ್ನಮ್ಮ, ಶೌರ್ಯ, ಸಾಹಸ ಹಾಗೂ ದೇಶ ಪ್ರೇಮದ ಪ್ರತಿರೂಪವಾಗಿದ್ದರು ಎಂದು ಬಣ್ಣಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>